JUNE 27, 2024
ALL INDIA RADIO- DHARWAD
PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ಹಾಲಿನ ದರ ಏರಿಕೆಯಿಂದ ಹೆಚ್ಚುವರಿಯಾಗಿ ಸಂಗ್ರಹವಾಗುವ ಹಣ ನೇರವಾಗಿ ರೈತರಿಗೆ ತಲುಪಲಿದೆ–ಮುಖ್ಯಮಂತ್ರಿ ಸಿದ್ದರಾಮಯ್ಯ.
- ರಾಜ್ಯದ 7 ಜಿಲ್ಲೆಗಳಲ್ಲಿ ಹೊಸದಾಗಿ ಕೃಷಿ ತರಬೇತಿ ಕೇಂದ್ರ ಆರಂಭ– ಕೃಷಿ ಸಚಿವ ಚೆಲುವರಾಯಸ್ವಾಮಿ
- ಅನಧಿಕೃತ ಬಡಾವಣೆಗಳ ಸಮಸ್ಯೆ ಬಗೆಹರಿಸಲು ಸರ್ಕಾರದ ಮಟ್ಟದಲ್ಲಿ ಕ್ರಮ–ಸಚಿವ ಸಂತೋಷ ಲಾಡ.
- ಮಹಿಳೆಯರ ಮೇಲಿನ ದೌರ್ಜನ್ಯ ತಡೆಯಲು ಕಾನೂನು ಜಾಗೃತಿ ಅಗತ್ಯ–ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ.

ಈಗ ವಾರ್ತೆಗಳ ವಿವರ

*******

ರಾಜ್ಯದಲ್ಲಿ ಹಾಲಿನ ದರ ಏರಿಕೆಯಿಂದ ಪ್ರತಿ ಲೀಟರ್‌ಗೆ ಹೆಚ್ಚುವರಿಯಾಗಿ ಸಂಗ್ರಹವಾಗುವ 2 ರೂಪಾಯಿ ನೇರವಾಗಿ ರೈತರನ್ನು ತಲುಪಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಾಲಿನ ಪ್ಯಾಕೇಟಿನಲ್ಲಿ 50 ಮಿಲೀ ಹಾಲು ಹೆಚ್ಚುವರಿಯಾಗಿ ಸೇರಿಸಿ, ಈ ಹೆಚ್ಚುವರಿ ಹಾಲಿಗೆ ರೂಪಾಯಿ 2 ದರ ನಿಗದಿಪಡಿಸಲಾಗಿದೆ ಎಂದರು.

ಹಾಲಿನ ಉತ್ಪಾದನೆ 99 ಲಕ್ಷ ಲೀಟರ್ ಹೆಚ್ಚಾಗಿದ್ದು, ಹೋಟೆಲ್ ಮಾಲೀಕರು ಕಾಫಿ–ಟೀ ದರ ಹೆಚ್ಚಿಸಬಾರದು ಎಂದು ಮುಖ್ಯಮಂತ್ರಿ ಸೂಚಿಸಿದರು.

*******

ರಾಜ್ಯದಲ್ಲಿ ಈ ವರ್ಷ 7 ಜಿಲ್ಲೆಗಳಲ್ಲಿ ಹೊಸದಾಗಿ ಕೃಷಿ ತರಬೇತಿ ಕೇಂದ್ರಗಳನ್ನು ಪ್ರಾರಂಭಿಸಲಾಗುವುದು ಎಂದು ಕೃಷಿ ಸಚಿವ ಚೆಲುವರಾಯಸ್ವಾಮಿ ಹೇಳಿದ್ದಾರೆ.

ಬೆಳಗಾವಿ ಸುವರ್ಣಸೌಧ ಸಭಾಂಗಣದಲ್ಲಿ ನಿನ್ನೆ ಕೃಷಿ ಮತ್ತು ಜಲಾನಯನ ಇಲಾಖೆಗಳ ವಿಭಾಗ ಮಟ್ಟದ ಸಭೆಯಲ್ಲಿ ಈ ವಿಷಯ ತಿಳಿಸಿದ ಅವರು, ವಿಜಯನಗರ, ಯಾದಗಿರಿ, ಗದಗ, ಕೋಲಾರ, ಚಾಮರಾಜನಗರ, ರಾಮನಗರ, ಉಡುಪಿ ಜಿಲ್ಲೆಗಳಲ್ಲಿ ಹೊಸ ಕೃಷಿ ತರಬೇತಿ ಕೇಂದ್ರ ಪ್ರಾರಂಭಿಸಲಾಗುವುದು ಎಂದರು.

ರಾಜ್ಯದಲ್ಲಿ ಬಿತ್ತನೆ ಬೀಜ, ರಸಗೊಬ್ಬರಗಳ ಬೇಡಿಕೆಗಿಂತಲೂ ಹೆಚ್ಚು ದಾಸ್ತಾನು ಇದೆ ಎಂದು ಸಚಿವರು ತಿಳಿಸಿದರು.

*******

ಅಸುರಕ್ಷತೆಯಿಂದ ಸಂಭವಿಸಬಹುದಾದ ವಿದ್ಯುತ್ ಅವಘಡಗಳನ್ನು ತಪ್ಪಿಸುವಲ್ಲಿ, ಸರ್ಕಾರದ ಜೊತೆ ಕೈ ಜೋಡಿಸುವುದು ಪ್ರತಿಯೊಬ್ಬರ ಕರ್ತವ್ಯ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಹೇಳಿದ್ದಾರೆ.

ರಾಷ್ಟ್ರೀಯ ವಿದ್ಯುತ್ ಸುರಕ್ಷತಾ ಸಪ್ತಾಹದ ನಿಮಿತ್ತ ಬೆಂಗಳೂರಿನಲ್ಲಿ ಆಯೋಜಿಸಿದ್ದ ಕಾಲ್ನಡಿಗೆ ಜಾಥಾಕ್ಕೆ ಚಾಲನೆ ನೀಡಿ, ಮಾತನಾಡಿದ ಅವರು, ವಿದ್ಯುತ್ ಬಳಕೆ ಅಗತ್ಯವೂ ಹೌದು. ಅದರಿಂದ ಅಪಾಯವೂ ಇದೆ. ವಿದ್ಯುತ್‌ನಿಂದಾಗುವ ಅಪಾಯಗಳು, ಬೆಂಕಿ ಅವಘಡಗಳು, ಪ್ರಾಣ ಹಾನಿಯನ್ನು ತಪ್ಪಿಸಲು ತೆಗೆದುಕೊಳ್ಳಬೇಕಾದ ಎಚ್ಚರಿಕೆ ಕ್ರಮಗಳ ಬಗ್ಗೆ ಪ್ರತಿಯೊಬ್ಬರೂ ಮಾಹಿತಿ ಪಡೆಯುವುದು ಅಗತ್ಯ ಎಂದರು.

*******

ವಾಲ್ಮೀಕಿ ಅಭಿವೃದ್ಧಿ ನಿಗಮದದಲ್ಲಿ ನಡೆದಿದೆ ಎನ್ನಲಾದ 187 ಕೋಟಿ ರೂಪಾಯಿ ಹಗರಣ ಸಂಬಂಧ ಇದೇ 28 ರಂದು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಲಾಗುವುದು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಹಗರಣ ನಡೆಯಲು ಹಣಕಾಸು ಖಾತೆಯನ್ನು ಹೊಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಜವಾಬ್ದಾರಿ ಎಂದರು.

ಪರಿಶಿ ್ಟ ಪಂಗಡಕ್ಕೆ ಮೀಸಲಿಟ್ಟ ಹಣ ದುರ್ಬಳಕೆಯಾಗಿದ್ದು, ಕಾಂಗ್ರೆಸ್ ಸರಕಾರ ಆತುರಾತುರವಾಗಿ ಎಸ್‌ಐಟಿ ರಚಿಸಿ ತಮಗೆ ಬೇಕಾದಂತೆ ತನಿಖೆ ನಡೆಸುತ್ತಿದೆ. ಹಗರಣಕ್ಕೆ ಸಂಬಂಧಿಸಿದಂತೆ ಸಚಿವ ಶರಣಪ್ರಕಾಶ್ ಪಾಟೀಲ್ ಹಾಗೂ ನಿಗಮದ ಅಧ್ಯಕ್ಷರು ಕೂಡಲೇ ರಾಜೀನಾಮೆ ನೀಡಬೇಕು ಎಂದು ವಿಜಯೇಂದ್ರ ಆಗ್ರಹಿಸಿದರು.

*******

2024 ರ ಜನವರಿ ಅಂತ್ಯಕ್ಕೆ 39 ಇಲಾಖೆಗಳಿಗೆ ಸಂಬಂಧಿಸಿದ 7 ವರದಿಗಳನ್ನು ಆಡಳಿತ ಸುಧಾರಣಾ ಆಯೋಗ ತಯಾರಿಸಿ ಸರ್ಕಾರಕ್ಕೆ ಸಲ್ಲಿಸಿದ್ದು, ಈ ವರದಿಗಳಲ್ಲಿ ಒಟ್ಟು 5039 ಶಿಫಾರಸ್ಸುಗಳನ್ನು ಮಾಡಲಾಗಿದೆ ಎಂದು ಕರ್ನಾಟಕ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್.ವಿ.ದೇಶಪಾಂಡೆ ಹೇಳಿದ್ದಾರೆ.

ಕಾರವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ, ನಿನ್ನೆ ಜಿಲ್ಲೆಯ ಎಲ್ಲಾ ಜನಪ್ರತಿನಿಧಿಗಳು, ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ, ಆಡಳಿತ ಸುಧಾರಣೆಯ ಬಗ್ಗೆ ಸಲಹೆಗಳನ್ನು ಸ್ವೀಕರಿಸಿ ಅವರು ಮಾತನಾಡಿದರು.

ಆಡಳಿತದಲ್ಲಿ ಪಾರದರ್ಶಕತೆ, ಸರಳತೆ ಹಾಗೂ ಸಕಾಲದಲ್ಲಿ ನಾಗರಿಕ ಸೇವೆಗಳನ್ನು ಕಡಿಮೆ ಖರ್ಚಿನಲ್ಲಿ ಒದಗಿಸಲು ಮಾಡಬೇಕಾದ ಸುಧಾರಣೆಗಳು ಹಾಗೂ ಇಲಾಖೆಗಳ ಒಟ್ಟಾರೆ ಕಾರ್ಯನಿರ್ವಹಣೆ ಸುಧಾರಿಸಲು ಎರಡನೇ ಕರ್ನಾಟಕ ಆಡಳಿತ ಸುಧಾರಣಾ ಆಯೋಗ ಆದ್ಯತೆ ನೀಡಿದೆ ಎಂದು ಅವರು ಹೇಳಿದರು.

*******

ಹುಬ್ಬಳ್ಳಿ ಧಾರವಾಡ ಅವಳಿನಗರಗಳಲ್ಲಿ ತಲೆ ಎತ್ತುತ್ತಿರುವ ಅನಧಿಕೃತ ಬಡಾವಣೆಗಳ ಸಮಸ್ಯೆ ಬಗೆಹರಿಸಲು ಸರ್ಕಾರದ ಮಟ್ಟದಲ್ಲಿ ಚರ್ಚಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ ಹೇಳಿದ್ದಾರೆ.

ಧಾರವಾಡ ಜಿಲ್ಲಾಡಳಿತದವತಿಯಿಂದ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ನಿನ್ನೆ ನಡೆದ ಜಿಲ್ಲಾ ಮಟ್ಟದ 5 ನೇ ಜನತಾ ದರ್ಶನ ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಅಹವಾಲುಗಳನ್ನು ಸ್ವೀಕರಿಸಿ, ಮಾತನಾಡಿದ ಅವರು, ವಿವಿದೆಡೆ ಕಾನೂನುಬಾಹಿರ, ಅನಧಿಕೃತ ಬಡಾವಣೆಗಳು ನಿರ್ಮಾಣವಾಗುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಗಳಾಗಿವೆ. ಹೊಸ ಕಾನೂನುಗಳನ್ವಯ ಅನಧಿಕೃತ ಬಡಾವಣೆಗಳ ಸಮಸ್ಯೆ ಬಗೆಹರಿಸಲು ಸರಕಾರದ ಗಮನಕ್ಕೆ ತರಲಾಗುವುದು ಎಂದು ಅವರು ಹೇಳಿದರು.

*******

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರವಾಸೋದ್ಯಮವನ್ನು ಇನ್ನ ಷ್ಟು ಆಕರ್ಷಿಸಲು ಪ್ರತಿ ತಿಂಗಳು ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದು ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಹೇಳಿದ್ದಾರೆ.

ಮಂಗಳೂರಿನ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಿನ್ನೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಹೊಸ ಹೊಸ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಪ್ರವಾಸಿಗರನ್ನು ಆಕರ್ಷಿಸಲಾಗುವುದು. ಇದಕ್ಕಾಗಿ ಸಿದ್ಧತೆ ನಡೆದಿದೆ ಎಂದರು.

ಅಂತಾರಾಷ್ಟ್ರೀಯ ಗಾಳಿಪಟ ಉತ್ಸವ, ಸ್ಟ್ರೀಟ್ ಫುಡ್ ಫೆಸ್ಟಿವಲ್, ಪೆಡಲ್ ಫೆಸ್ಟಿವಲ್, ಪುಸ್ತಕ ಪ್ರದರ್ಶನ, ನದಿ ಉತ್ಸವ, ಕರಾವಳಿ ಉತ್ಸವ, ಬೀಚ್ ಉತ್ಸವ, ಮ್ಯಾರಥಾನ್, ಆಟೋಕ್ರಾಸ್ ಮತ್ತಿತರ ಕಾರ್ಯಕ್ರಮಗಳನ್ನು ಪ್ರತಿ ತಿಂಗಳು ಏರ್ಪಡಿಸಲಾಗುವುದು ಎಂದು ಅವರು ಹೇಳಿದರು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಆಕಾಶವಾಣಿಯ 'ಮನ್ ಕಿ ಬಾತ್' ಕಾರ್ಯಕ್ರಮದ ಮೂಲಕ, ಇದೇ ತಿಂಗಳ 30 ರಂದು ಬೆಳಗ್ಗೆ 11 ಗಂಟೆಗೆ ಪ್ರಧಾನಮಂತ್ರಿ ನರೇಂದ್ರಮೋದಿ ಅವರು ತಮ್ಮ ವಿಚಾರಗಳನ್ನು ದೇಶದ ಜನತೆಯೊಂದಿಗೆ ಹಂಚಿಕೊಳ್ಳಲಿದ್ದಾರೆ.

ಇದು ಮನದ ಮಾತು ಸರಣಿಯ 111 ನೇ ಸಂಚಿಕೆಯಾಗಿದ್ದು, ಚುನಾವಣಾ ಕಾರಣದಿಂದಾಗಿ ಕೆಲವು ತಿಂಗಳ ನಂತರ ಮನ್ ಕಿ ಬಾತ್ ಮತ್ತೇ ಪ್ರಸಾರವಾಗಲಿದೆ. ನಮೋ ಆ್ಯಪ್ ಅಥವಾMy Gov.in ಜಾಲತಾಣದಲ್ಲಿ ಜನತೆ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳಲು ನಾಳೆ ಕೊನೆಯ ದಿನ.

ಟೋಲ್ ಫ್ರೀ ಸಂಖ್ಯೆ 1800-11-7800 ಗೆ ಕರೆ ಮಾಡಿ ಹಿಂದಿ ಅಥವಾ ಇಂಗ್ಲಿಷ್‌ನಲ್ಲಿ ತಮ್ಮ ಸಂದೇಶವನ್ನೂ ಸಹ ಸಾರ್ವಜನಿಕರು ದಾಖಲಿಸಬಹುದು.1-9-2-2 ಸಂಖ್ಯೆಗೆ ಮಿಸ್ಡ್‌ಕಾಲ್ ನೀಡಿ, ಎಸ್.ಎಂ.ಎಸ್.ನಿಂದ ಪಡೆಯಲಾಗುವ ಲಿಂಕ್ ಮೂಲಕ ನೇರವಾಗಿ ಪ್ರಧಾನಮಂತ್ರಿ ಅವರಿಗೆ ತಮ್ಮ ಸಲಹೆ ಹಾಗೂ ಸೂಚನೆಗಳನ್ನು ನೀಡಬಹುದು.

*******

'ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಜನವಿರೋಧಿ ಆಡಳಿತ ನಡೆಸುತ್ತಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಟೀಕಿಸಿದ್ದಾರೆ.

ದೆಹಲಿಯಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಲ ದಿನಗಳ ಹಿಂದೆ ಸರ್ಕಾರ ಪೆಟ್ರೋಲ್, ಡೀಸೆಲ್ ದರ ಏರಿಸಿತ್ತು. ಇದೀಗ ಹಾಲಿನ ದರ ಹೆಚ್ಚಳ ಮಾಡಿದೆ. ರೈತರಿಗೆ ಹಾಲಿನ ಮೇಲಿನ ಸಬ್ಸಿಡಿಯನ್ನು ನಿಲ್ಲಿಸಲಾಗಿದೆ ಎಂದರು.

*******

ಮಹಿಳೆಯರ ಮೇಲಿನ ದೌರ್ಜನ್ಯ ತಡೆಯಲು ಪೋಸ್ಕೋ ಕಾಯ್ದೆ ಕುರಿತು ಜನಜಾಗೃತಿ ಮೂಡಿಸಬೇಕು ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ ಸೂಚನೆ ನೀಡಿದ್ದಾರೆ.

ಕಲಬುರಗಿಯ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಲ್ಲಿ ನಿನ್ನೆ ಮಹಿಳಾ ಮೀಸಲಾತಿ, ಸರ್ಕಾರಿ–ಖಾಸಗಿ ಸಂಸ್ಥೆಯಲ್ಲಿ ಅಂತರಿಕ ದೂರು ಸಮಿತಿ ರಚನೆ, ಮಹಿಳಾ ದೌರ್ಜನ್ಯ ಪ್ರಕರಣ ಮತ್ತು ಸುರಕ್ಷತೆ ಕುರಿತಂತೆ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿ ಅವರು ಮಾತನಾಡಿದರು.

ದೌರ್ಜನ್ಯ ಪ್ರಕರಣ ಕಡಿಮೆಗೊಳಿಸಲು ಕಾನೂನಿನ ಅರಿವು ಮುಖ್ಯ. ವಿಶೇ ʼವಾಗಿ ದೌರ್ಜನ್ಯ, ಪೋಸ್ಕೋ, ಬಾಲ್ಯ ವಿವಾಹ ನಿ ʼೀಧ ಹೀಗೆ ವಿವಿಧ ವಿ ʼಯಗಳ ಕುರಿರಂತೆ ಜಾಗೃತಿ ಮೂಡಿಸಲು ಪ್ರತಿ 6 ತಿಂಗಳಿಗೊಮ್ಮೆ, ಶಾಲೆ, ಕಾಲೇಜು ಹಾಗೂ ವಸತಿ ನಿಲಯದಲ್ಲಿ ಕಾನೂನು ಅರಿವು–ನೆರವು ಕಾರ್ಯಕ್ರಮ ಆಯೋಜಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಳಿಗೆ ಸೂಚಿಸಿದರು.

*******

ಧಾರವಾಡ ಕೃಷಿ ವಿಶ್ವವಿದ್ಯಾಲಯದ 37 ನೇ ಘಟಿಕೋತ್ಸವ ಇದೇ 27 ರಂದು ಬೆಳಿಗ್ಗೆ 11.00 ಗಂಟೆಗೆ ವಿಶ್ವವಿದ್ಯಾಲಯದ ರೈತರ ಜ್ಞಾನಾಭಿವೃದ್ಧಿ ಕೇಂದ್ರದಲ್ಲಿ ಜರುಗಲಿದೆ.

ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ ಪದವಿ ಮತ್ತು ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದು, ನವದೆಹಲಿಯ ಕೃಷಿ ವಿಜ್ಞಾನಿಗಳ ನೇಮಕಾತಿ ಮಂಡಳಿ ಅಧ್ಯಕ್ಷ ಡಾ. ಸಂಜಯ ಕುಮಾರ ಘಟಿಕೋತ್ಸವ ಭಾಷಣ ಮಾಡಲಿದ್ದಾರೆ.

ಘಟಿಕೋತ್ಸವದಲ್ಲಿ, ಡಾ. ಎಸ್. ಸೋಮನಾಥ, ಅಧ್ಯಕ್ಷರು, ಇಸ್ರೋ, ಬೆಂಗಳೂರು ಇವರಿಗೆ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

*******

ದಕ್ಷಿಣ ಕನ್ನಡ ಜಿಲ್ಲೆಯ ಮುನ್ನೂರು ಗ್ರಾಮದ ಮದನಿ ನಗರ ಎಂಬಲ್ಲಿ ಮನೆ ಕುಸಿದು ಒಂದೇ ಕುಟುಂಬದ ನಾಲ್ಕು ಮಂದಿ ಸಾವನ್ನಪ್ಪಿದ ಘಟನೆ ನಿನ್ನೆ ಸಂಭವಿಸಿದೆ.

ಮೃತರನ್ನು ಯಾಸಿರ್, ಪತ್ನಿ ಮರಿಯಮ್ಮ, ಮಕ್ಕಳಾದ ರಿಯಾನ ಮತ್ತು ರಿಫಾನ ಎಂದು ಗುರುತಿಸಲಾಗಿದೆ. ಸ್ಥಳಕ್ಕೆ ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಸೇರಿದಂತೆ ಹಿರಿಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು.

*******

ಈಗ ಸಂಕ್ಷಿಪ್ತ ಸುದ್ದಿಗಳು

18 ನೇ ಲೋಕಸಭೆಯ ಸ್ಪೀಕರ್ ಆಗಿ ಬಿಜೆಪಿ ಸದಸ್ಯ ಓಂ ಬಿರ್ಲಾ ಆಯ್ಕೆಯಾಗಿದ್ದಾರೆ.

ಕರ್ನಾಟಕ ವಿಧಾನಸಭೆಯಿಂದ ವಿಧಾನ ಪರಿ ‌ ತ್ತಿನ ಒಂದು ಸ್ಥಾನಕ್ಕೆ ನಡೆಯಲಿರುವ ಉಪ ಚುನಾವಣೆಗೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಬಸವನಗೌಡ ಬಾದರ್ಲಿ ನಿನ್ನೆ ನಾಮಪತ್ರ ಸಲ್ಲಿಸಿದರು.

ಬಾಗಲಕೋಟೆ ಜಿಲ್ಲೆಯನ್ನು ಹಚ್ಚ ಹಸಿರಾಗಿಸುವ ಉದ್ದೇಶದಿಂದ ಜಿಲ್ಲೆಯಾದ್ಯಂತ ಹಮ್ಮಿಕೊಂಡಿರುವ ಲಕ್ಷ ಸಸಿ ನೆಡುವ ಕಾರ್ಯಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ನಿನ್ನೆ ಚಾಲನೆ ನೀಡಿದರು.

ಜನರ ಅಹವಾಲುಗಳನ್ನು ಜಿಲ್ಲಾ ಮಟ್ಟದಲ್ಲಿಯೇ ಆಲಿಸಿ ಸೂಕ್ತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಮಧು ಬಂಗಾರಪ್ಪ ನೇತೃತ್ವದಲ್ಲಿ ಇಂದು ಬೆಳಿಗ್ಗೆ 9.30 ರಿಂದ ನಗರದ ಕುವೆಂಪು ರಂಗಮಂದಿರದಲ್ಲಿ 'ಜನ ಸ್ಪಂದನ' ಕಾರ್ಯಕ್ರಮ ಏರ್ಪಡಿಸಲಾಗಿದೆ.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಹಾಲಿನ ದರ ಏರಿಕೆಯಿಂದ ಹೆಚ್ಚುವರಿಯಾಗಿ ಸಂಗ್ರಹವಾಗುವ ಹಣ ನೇರವಾಗಿ ರೈತರಿಗೆ ತಲುಪಲಿದೆ–ಮುಖ್ಯಮಂತ್ರಿ ಸಿದ್ದರಾಮಯ್ಯ.

ರಾಜ್ಯದ 7 ಜಿಲ್ಲೆಗಳಲ್ಲಿ ಹೊಸದಾಗಿ ಕೃಷಿ ತರಬೇತಿ ಕೇಂದ್ರ ಆರಂಭ– ಕೃಷಿ ಸಚಿವ ಚೆಲುವರಾಯಸ್ವಾಮಿ

ಅನಧಿಕೃತ ಬಡಾವಣೆಗಳ ಸಮಸ್ಯೆ ಬಗೆಹರಿಸಲು ಸರ್ಕಾರದ ಮಟ್ಟದಲ್ಲಿ ಕ್ರಮ–ಸಚಿವ ಸಂತೋಷ ಲಾಡ.

ಮಹಿಳೆಯರ ಮೇಲಿನ ದೌರ್ಜನ್ಯ ತಡೆಯಲು ಕಾನೂನು ಜಾಗೃತಿ ಅಗತ್ಯ–ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು
ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 7 ಗಂಟೆ 35 ನಿಮಿಷಕ್ಕೆ